ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉನಿ : ಸುಮಪ : 2018–19 :** **ದಿನಾಂಕ : 23–10–2018**

# ಪತ್ರಿಕಾ ಆಮಂತ್ರಣ

1. ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ:

**ಶ್ರೀ ಮಹರ್ಷಿ ವಾಲ್ಮೀಕಿ ಪ್ರತಿಮೆಗೆ ಮಾಲಾರ್ಪಣೆ:**
**ಹೆಚ್. ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿಗಳು.**

ಡಾ. ಜಿ. ಪರಮೇಶ್ವರ್, ಉಪ ಮುಖ್ಯಮಂತ್ರಿಗಳು.

ಪ್ರಿಯಾಂಕ್ ಖರ್ಗೆ, ಸಮಾಜ ಕಲ್ಯಾಣ ಸಚಿವರು.

**ಅಧ್ಯಕ್ಷತೆ:**
ಆರ್. ರೋಷನ್ ಬೇಗ್, ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ.

ದಿನಾಂಕ: 24-10-2018, ಬುಧವಾರ, ಸಮಯ: ಬೆಳಿಗ್ಗೆ 10–30 ಗಂಟೆಗೆ.
ಸ್ಥಳ: "ಶ್ರೀ ಮಹರ್ಷಿ ವಾಲ್ಮೀಕಿ ತಪೋವನ" ಶಾಸಕರ ಭವನದ ಮುಂಬಾಗ, ವಿಧಾನಸೌಧದ ಹತ್ತಿರ, ಬೆಂಗಳೂರು.

**ಸಂಖ್ಯೆ:1178/1278**

## ರವೀಂದ್ರ ಕಲಾಕ್ಷೇತ್ರದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತೋತ್ಸವ ಆಚರಣೆ

ಬೆಂಗಳೂರು, ಅಕ್ಟೋಬರ್ 23 (ಕರ್ನಾಟಕ ವಾರ್ತೆ) :

ಬ್ರಿಟಿಷರ ವಿರುದ್ಧ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ದಿಟ್ಟ ಮಹಿಳೆ ಕಿತ್ತೂರು ರಾಣಿ ಚೆನ್ನಮ್ಮ. ಇವರು ಒಂದು ಸಮುದಾಯ ಅಥವಾ ಪ್ರಾಂತ್ಯಕ್ಕೆ ಸೇರಿದವರಲ್ಲ. ಕರ್ನಾಟಕದ ಇತಿಹಾಸದಲ್ಲಿ ಅಚ್ಚಳಿಯದೆ ಉಳಿಯುವಂತವರು. ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯನ್ನು ಸರ್ಕಾರ ಆಚರಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಕೂಡಲಸಂಗಮ ಲಿಂಗಾಯಿತ ಪಂಚಮಸಾಲಿ ಜಗದ್ಗುರುಗಳಾದ ಶ್ರೀ ಜಯಬಸವ ಮೃತ್ಯುಂಜಯ ಮಹಾಸ್ವಾಮಿಗಳು ಹೇಳಿದರು.

ಅವರು ಇಂದು ರವೀಂದ್ರ ಕಲಾಕ್ಷೇತ್ರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಳ್ಳಲಾದ ವೀರರಾಣಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಿತ್ತೂರು ರಾಣಿ ಚೆನ್ನಮ್ಮ ಬಳಿಯಿದ್ದ ಕತ್ತಿ, ಪೋಷಾಕು ಇಂಗ್ಲೆಂಡಿನಲ್ಲಿದ್ದು, ಇದನ್ನು ಭಾರತಕ್ಕೆ ಮರಳಿ ಪಡೆಯಬೇಕು. ಬೆಳಗಾವಿಯ ಸುವರ್ಣ ಸೌಧದಲ್ಲಿ ಚೆನ್ನಮ್ಮ ಪ್ರತಿಮೆ ಅನಾವರಣಾಗೊಳ್ಳಬೇಕು. ಅಲ್ಲದೆ ಕೇಂದ್ರ ಸರ್ಕಾರ ಸಹ ಕಿತ್ತೂರು ಚೆನ್ನಮ್ಮ ಜಯಂತಿಯನ್ನು ಆಚರಿಸಬೇಕೆಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ಸಚಿವೆ ಲೀಲಾದೇವಿ ಆರ್. ಪ್ರಸಾದ್ ಕರ್ನಾಟಕದ ಇಬ್ಬರು ಸ್ತ್ರೀ ಶಕ್ತಿಗಳನ್ನು ಸದಾ ನೆನಪಿನಲ್ಲಿರುವಂತೆ ಮಾಡಬೇಕೆಂಬುದು ನನ್ನ ಆಶಯವಾಗಿತ್ತು. ಒಬ್ಬರು ಕಿತ್ತೂರು ರಾಣಿ ಚೆನ್ನಮ್ಮ ಶೌರ್ಯಶಕ್ತಿಯಾದರೆ, ಮತ್ತೊಬ್ಬರು ಅಕ್ಕಮಹಾದೇವಿ ಆಧ್ಯಾತ್ಮಿಕ ಶಕ್ತಿ, ಭಾರತದ ಸ್ವಾತಂತ್ರ್ಯ ಸಂಗ್ರಾಮ ಇತಿಹಾಸದಲ್ಲಿ ಕಿತ್ತೂರು ರಾಣಿ ಚೆನ್ನಮ್ಮನ ಹೆಸರು ಅಜರಾಮರ. ತಾವು ಕೂಡ ಅದೇ ಮನೆತನಕ್ಕೆ ಸೇರಿದ್ದಾಗಿ ಹೆಮ್ಮೆಯಿಂದ ನುಡಿದರು.

ಕಿತ್ತೂರು ಚೆನ್ನಮ್ಮ ಹೆಸರಿನಲ್ಲಿ ನೀಡುವ ಪ್ರಶಸ್ತಿಯನ್ನು ಅದ್ವಿತೀಯ ಸಾಧನೆ ಮಾಡಿ ತನ್ನ ಪ್ರಾಣ ಮುಡಿಪಾಗಿಟ್ಟು ಮತ್ತೊಬ್ಬರನ್ನು ಬದುಕಿಸಿದ ದಿಟ್ಟ ಮಹಿಳೆಗೆ ನೀಡಬೇಕೆಂದು ಅವರು ಅಭಿಪ್ರಾಯಪಟ್ಟರು.

ಸಾಹಿತಿ ಡಾ: ಶಾರದಾ ಮಳ್ಳೂರು ಅವರು ಮಾತನಾಡಿ ಕಿತ್ತೂರು ರಾಣಿ ಚೆನ್ನಮ್ಮ ಭಾರತದ ಸ್ವಾತಂತ್ರ್ಯ ದೇವತೆ, ಬೆಳ್ಳಿ ಚುಕ್ಕಿ ಧೃವತಾರೆ, 1857 ರಲ್ಲಿ ಅವರು ಸ್ವಾತಂತ್ರ್ಯ ಸಂಗ್ರಾಮದಲ್ಲಿ ತೊಡಗಿದ್ದರು. ಈ ನಾಡು ಕಂಡ ಹೆಮ್ಮೆಯ ದಿಟ್ಟ ಮಹಿಳೆ. ತನ್ನ ಗಂಡ, ಮಗನ ಅಕಾಲಿಕ ಸಾವಿನ ನಡುವೆಯೂ ಎದೆಗುಂದದೆ ಕಿತ್ತೂರು ಸಂಸ್ಥಾನದಲ್ಲಿ ದೇಶಾಭಿಮಾನ ಮೆರೆದಂತವರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ನುಡಿಯನ್ನಾಡಿದ ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ಅವರು ಭಾರತದ ಇತಿಹಾಸದಲ್ಲಿ ಝಾನ್ಸಿರಾಣಿ ಲಕ್ಷ್ಮೀಭಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಇಬ್ಬರೂ ಸದಾ ಧೃವತಾರೆಯಾಗಿ ಮಿಂಚುತ್ತಾರೆ. ನಾವು ಮಹಿಳೆಯನ್ನು ಸದಾ ಗೌರವಿಸಬೇಕು. ಆಕೆ ನಮ್ಮ ಜೀವನದಲ್ಲಿ ಅನೇಕ ಸ್ಥಾನಗಳನ್ನು ತುಂಬಿ ನಮ್ಮ ಯಶಸ್ಸಿಗೆ ಕಾರಣವಾಗಿರುತ್ತಾಳೆ. ಕಿತ್ತೂರಿನಲ್ಲಿ 3 ದಿನಗಳ ಕಾಲ ಸರ್ಕಾರದಿಂದ ಕಿತ್ತೂರ ಉತ್ಸವವನ್ನು ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಇಲಾಖೆ ಕಿತ್ತೂರು ರಾಣಿ ಚೆನ್ನಮ್ಮ ಕುರಿತು ಕಿರು ಹೊತ್ತಿಗೆಯನ್ನು ಸಹ ತರಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕರಾದ ಬಸವರಾಜ ಹೂಗಾರ್ ಅತಿಥಿಗಳನ್ನು ಸ್ವಾಗತಿಸಿದರು.

ಕಾರ್ಯಕ್ರಮದ ಅಂಗವಾಗಿ ಕಲಾ ತಂಡಗಳಿಂದ ಬಿಬಿಎಂಪಿ ಕಚೇರಿಯಿಂದ ರವೀಂದ್ರ ಕಲಾಕ್ಷೇತ್ರದವರೆಗೆ ಮೆರವಣಿಗೆ ಹಮ್ಮಿಕೊಳ್ಳಲಾಗಿತ್ತು.

**ಸಂಖ್ಯೆ:1179/1279**

**ಸಂಖ್ಯೆ:1180/1280**

## ಉದ್ಯೋಗ ಮೇಳ

ಬೆಂಗಳೂರು, ಅಕ್ಟೋಬರ್ 23 (ಕರ್ನಾಟಕ ವಾರ್ತೆ) :

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಖಾಸಗಿ ನಿಯೋಜಕರ ಸಂಯುಕ್ತ ಆಶ್ರಯದಲ್ಲಿ ಅಕ್ಟೋಬರ್ 27 ರಂದು ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ.

ನಗರದ ಕೆಂಪೇಗೌಡ ರಸ್ತೆಯಲ್ಲಿನ ಜನತಾ ಬಜಾರ್ ಕಟ್ಟಡದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಆವರಣ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 4.00 ಗಂಟೆಯವರೆಗೆ ನೆಡೆಯಲಿದೆ.

ಈ ಉದ್ಯೋಗ ಮೇಳದಲ್ಲಿ ಖಾಸಗಿ ವಲಯದ 15 ಕ್ಕೂ ಹೆಚ್ಚು ಹೆಸರಾಂತ ಸಂಸ್ಥೆಗಳು ಭಾಗವಹಿಸುತ್ತಿದ್ದು ವಿವಿಧ ತಾಂತ್ರಿಕ ಹಾಗೂ ತಾಂತ್ರಿಕೇತರ ಹುದ್ದೆಗಳಿಗೆ ಸ್ಥಳದಲ್ಲೇ ನೇರವಾಗಿ ಆಯ್ಕೆ ಮಾಡಲಿದ್ದಾರೆ.

ಅಕ್ಷರಸ್ಥರು, ಅರ್ಧದಲ್ಲಿಯೇ ಶಾಲೆ ಬಿಟ್ಟವರು ಹಾಗೂ ಎಸ್.ಎಸ್.ಎಲ್.ಸಿ. ಫೇಲ್/ಪಾಸ್, ಪಿ.ಯು.ಸಿ. ಐ.ಟಿ.ಐ. ಮತ್ತು ಡಿಪ್ಲೊಮಾ (ಎಲ್ಲಾ ಟ್ರೇಡ್‌ಗಳು) ಮತ್ತು ಪದವೀಧರರು ಹಾಗೂ ಸ್ನಾತಕೋತ್ತರ ಪದವಿ ಹೊಂದಿದವರಿಗೆ ಉದ್ಯೋಗ ಅವಕಾಶಗಳು ಲಭ್ಯವಿದೆ. ಉದ್ಯೋಗಾಂಕ್ಷಿಗಳು ತಮ್ಮ ವೈಯಕ್ತಿಕ (ಬಯೋಡಾಟಾ)ವಿವರಗಳೊಂದಿಗೆ "ಉದ್ಯೋಗ ಮೇಳ"ದಲ್ಲಿ ಭಾಗವಹಿಸಿ ಉದ್ಯೋಗ ದೊರೆಯುವ ಸದವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗೆ 22374582/ 22261184/22259351/22268846/22354443 ಸಂಪರ್ಕಿಸಬಹುದಾಗಿದೆ.

**ಸಂಖ್ಯೆ:1181/1282**

## ಎಸಿಬಿ ದಾಳಿ

ಬೆಂಗಳೂರು, ಅಕ್ಟೋಬರ್ 23(ಕರ್ನಾಟಕ ವಾರ್ತೆ)

ಬೆಂಗಳೂರು ನಗರದ ನಿವಾಸಿಯೊಬ್ಬರು ಹೋಟೆಲ್ ನಡೆಸಲು ಚೆನ್ನಮ್ಮನಕೆರೆ ಅಚ್ಚುಕಟ್ಟು ವ್ಯಾಪ್ತಿಯ ಬಿಬಿಎಂಪಿ ಆರೋಗ್ಯ ವೈದ್ಯಾಧಿಕಾರಿಯವರ ಕಛೇರಿ, ಬಸವನಗುಡಿ ವಲಯದಲ್ಲಿ ಪರವಾನಿಗೆ ಕೋರಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಶ್ರೀ.ಎಂ.ಜಯಕುಮಾರ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.162, (ಗಿರಿನಗರ) ಬಸವನಗುಡಿ ಬಿಬಿಎಂಪಿ, ಬೆಂಗಳೂರು ಹಾಗೂ ಶ್ರೀ.ಜಗದೀಶ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.154, (ಎನ್‌ಆರ್ ಕಾಲೋನಿ) ಬಸವನಗುಡಿ ಬಿಬಿಎಂಪಿ, ಬೆಂಗಳೂರು ರವರು ಅರ್ಜಿದಾರರ ಹೋಟೆಲ್ ನಡೆಸಲು ಪರವಾನಿಗೆ ನೀಡಲು ರೂ. 30,000/- ರೂಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:23-10-2018 ರಂದು ಶ್ರೀ.ಎಂ.ಜಯಕುಮಾರ್ ರವರು ದೂರುದಾರರಿಂದ ರೂ.30,000/- ಲಂಚದ ಹಣವನ್ನು ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ನಗರ ಠಾಣೆಯ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿರುತ್ತಾರೆ. ಶ್ರೀ.ಜಗದೀಶ್ ಮತ್ತು ಶ್ರೀ.ಎಂ.ಜಯ್‌ಕುಮಾರ್ ರವರುಗಳನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ, ಪ್ರಕರಣದ ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ:1183/1283**

## ಮಕ್ಕಳ ಹಬ್ಬ ಮತ್ತು ಮಕ್ಕಳ ದಿನಾಚರಣೆ

ಬೆಂಗಳೂರು, ಅಕ್ಟೋಬರ್ 23 (ಕರ್ನಾಟಕ ವಾರ್ತೆ) :

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಇತರೆ ಇಲಾಖೆಗಳ ಸಹಯೋಗದೊಂದಿಗೆ ನವೆಂಬರ್ 10, 11 ಮತ್ತು 14 , 2018 ರಂದು ಮೂರು ದಿನಗಳ ಕಾಲ "ಮಕ್ಕಳ ಹಬ್ಬ" ಹಾಗೂ "ಮಕ್ಕಳ ದಿನಾಚರಣೆ" ಯನ್ನು ಕಬ್ಬನ್ ಉದ್ಯಾನವನ ಬೆಂಗಳೂರು ಇಲ್ಲಿ ಆಯೋಜಿಸಿದೆ. ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು, ಇಲಾಖಾ ಸಚಿವರು ಹಾಗೂ ಇತರೆ ಗಣ್ಯ ವ್ಯಕ್ತಿಗಳು ಪಾಲ್ಗೊಳ್ಳಲಿದ್ದಾರೆ.

ಕಬ್ಬನ್ ಉದ್ಯಾನವನದ ವಿವಿಧ ಸ್ಥಳಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ, ಮಕ್ಕಳಿಗಾಗಿ ಚಿತ್ರಕಲೆ ಸಂಗೀತ, ನೃತ್ಯ, ನಾಟಕ, ಜಾನಪದ ಕಾರ್ಯಕ್ರಮ, ಹಳ್ಳಿ ಆಟಗಳು, ಆರೋಗ್ಯ

ತಪಾಸಣೆ, ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಹತ್ತು ಸಾವಿರದಿಂದ ಹದಿನೈದು ಸಾವಿರಕ್ಕೂ ಹೆಚ್ಚು ಮಕ್ಕಳು ಇದರಲ್ಲಿ ಭಾಗವಹಿಸಲಿದ್ದಾರೆಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ:1184/1284**

# ACB Raid

Bengaluru, October 23 (Karnataka Information)

A resident of Bengaluru had sought for Hotel License at Chennammakere Achukatu BBMP Health Office, Basavanagudi Zone. Sri.M. Jayakumar, Senior Health Inspector, Ward No.162 (Girinagar) and Sri.Jagadish, Senior Health Inspector, Ward No.154 (N.R Colony) BBMP had demanded a bribe amount of Rs.30,000/- to do the same.

On 23.10.2018 the officials of ACB Bengaluru City have trapped Sri.M.Jayakumar while accepting the bribe amount of Rs.30,000/- from the complainant. Both have been arrested and the bribe amount has been seized. The case is under investigation says official press release.

**ಸಂಖ್ಯೆ:1185/1285**

# ಅವಧಿ ವಿಸ್ತರಣೆ

ಬೆಂಗಳೂರು, ಅಕ್ಟೋಬರ್ 23 (ಕರ್ನಾಟಕ ವಾರ್ತೆ) :

2019ನೇ ಮಾರ್ಚ್/ಏಪ್ರಿಲ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ರಾಜ್ಯದ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳ ಮೂಲಕ ಅರ್ಹ ವಿದ್ಯಾರ್ಥಿಗಳ ನೋಂದಣಿಗೆ ಸಂಬಂಧಪಟ್ಟಂತೆ ಅರ್ಹ ಖಾಸಗಿ ಅಭ್ಯರ್ಥಿಗಳ ನೊಂದಣಿ ಮತ್ತು ಶಾಲಾ ಸಂಕೇತ ಪಡೆಯಲು ದಿನಾಂಕ:29.10.2018ವರೆಗೆ ಮತ್ತು ಅರ್ಹ ಶಾಲಾ ಅಭ್ಯರ್ಥಿಗಳ, ಖಾಸಗಿ ಅಭ್ಯರ್ಥಿಗಳ ಹಾಗೂ ಪುನರಾವರ್ತಿತ ಅಭ್ಯರ್ಥಿಗಳ ವಿವರಗಳನ್ನು ಅನ್‌ಲೈನ್(SATS)ಮೂಲಕ ಅಪ್‌ಲೋಡ್ ಮಾಡಲು ದಿನಾಂಕ:31.10.2018ರವರೆಗೆ ವಿಸ್ತರಿಸಲಾಗಿದೆ. ದಿನಾಂಕ:31.10.2018ರೊಳಗೆ SATS ಜಾಲತಾಣವನ್ನು FREEZEಮಾಡಲಾಗುತ್ತದೆ. ಆದ್ದರಿಂದ ತಪ್ಪದೆ ಎಲ್ಲಾ ಅರ್ಹ ವಿದ್ಯಾರ್ಥಿಗಳ ವಿವರಗಳನ್ನು SATS ಜಾಲತಾಣದಲ್ಲಿ ದಿನಾಂಕ:31.10.2018ರೊಳಗಾಗಿ ಅಪ್‌ಲೋಡ್ ಮಾಡಲು ಎಲ್ಲಾ ಮುಖ್ಯ ಶಿಕ್ಷಕರುಗಳಿಗೆ ಪ್ರಕಟಣೆ ತಿಳಿಸಿದೆ.

## 26ನೇ ರಾಷ್ಟ್ರೀಯ ಮಕ್ಕಳ ವಿಜ್ಞಾನ ಸಮಾವೇಶ – 2018

### ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನಿಂದ ಬಾಲವಿಜ್ಞಾನಿಗಳಿಗೆ ಆಹ್ವಾನ

ಬೆಂಗಳೂರು, ಅಕ್ಟೋಬರ್ 23 (ಕರ್ನಾಟಕ ವಾರ್ತೆ) :

ಕೇಂದ್ರ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಆಶ್ರಯದಡಿಯಲ್ಲಿ ರಾಷ್ಟ್ರೀಯ ಮಕ್ಕಳ ವಿಜ್ಞಾನ ಸಮಾವೇಶವು 1993ರಿಂದ ಪ್ರತಿ ವರ್ಷ ದೇಶಾದ್ಯಂತ ಜರುಗುತ್ತಿರುವ ಶೈಕ್ಷಣಿಕವಾಗಿ ಮಹತ್ವಪೂರ್ಣವಾಗಿರುವ ಕಾರ್ಯಕ್ರಮವಾಗಿದೆ. ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಪ್ರಸ್ತುತ ರಾಷ್ಟ್ರೀಯ ಮಕ್ಕಳ ವಿಜ್ಞಾನ ಸಮಾವೇಶದ ಕಾರ್ಯಕ್ರಮವನ್ನು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ಸರ್ಕಾರ, ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ರಾಜ್ಯದಾದ್ಯಂತ ಸಂಘಟಿಸುತ್ತಿದೆ. ಎಂದು ವಿಜ್ಞಾನ ಪರಿಷತ್ತಿನ ಗೌರವ ಕಾರ್ಯದರ್ಶಿ ಗಿರೀಶ ಕಡ್ಲೇವಾಡ ತಿಳಿಸಿದ್ದಾರೆ.

ಈ ಸಮಾವೇಶದಲ್ಲಿ 10 ರಿಂದ 17 ವರ್ಷ ವಯೋಮಾನದ ಯಾವುದೇ ಮಾಧ್ಯಮದಲ್ಲಿ ಓದುತ್ತಿರುವ ಮಕ್ಕಳು ಇಬ್ಬರು ವಿದ್ಯಾರ್ಥಿಗಳ ಒಂದು ತಂಡದಲ್ಲಿ ಭಾಗವಹಿಸಬಹುದಾಗಿದೆ. ಈ ಸಮಾವೇಶದಲ್ಲಿ ಶಾಲೆ ಬಿಟ್ಟ ಮಕ್ಕಳು ಕೂಡ ಭಾಗವಹಿಸಲು ಅವಕಾಶವಿದ್ದು, ಸಮಾವೇಶವು ಜಿಲ್ಲಾಮಟ್ಟ, ರಾಜ್ಯಮಟ್ಟ ಹಾಗೂ ರಾಷ್ಟ್ರಮಟ್ಟದ 3 ಹಂತಗಳಲ್ಲಿ ಜರುಗುತ್ತದೆ. ಕಿರಿಯರ ತಂಡದಲ್ಲಿ 10–14

ವಯೋಮಾನದ ಮಕ್ಕಳು ಹಾಗೂ ಹಿರಿಯರ ತಂಡದಲ್ಲಿ 14 ರಿಂದ 17 ವಯೋಮಾನದ ಮಕ್ಕಳು ಭಾಗವಹಿಸಬಹುದಾಗಿದೆ.

ಭವಿಷ್ಯದ ಬಾಲವಿಜ್ಞಾನಿಗಳನ್ನು ರೂಪಿಸಲು ಈ ಸಮಾವೇಶ ಸೂಕ್ತ ವೇದಿಕೆಯಾಗಿದೆ. ಈ ಬಾರಿಯ ಸಮಾವೇಶದಲ್ಲಿ ವಿದ್ಯಾರ್ಥಿಗಳು **'ಸ್ವಚ್ಛ ಹಸಿರು ಮತ್ತು ಆರೋಗ್ಯವಂತ ರಾಷ್ಟ್ರಕ್ಕಾಗಿ ವಿಜ್ಞಾನ, ತಂತ್ರಜ್ಞಾನ ಮತ್ತು ಆವಿಷ್ಕಾರಗಳು'** ಎಂಬ ಶೀರ್ಷಿಕೆಯಡಿಯಲ್ಲಿ ತಮ್ಮ ಶಿಕ್ಷಕರ ಮಾರ್ಗದರ್ಶನದೊಂದಿಗೆ ವೈಜ್ಞಾನಿಕವಾಗಿ ಅಧ್ಯಯನವನ್ನು ಕೈಗೊಳ್ಳಬೇಕಿರುತ್ತದೆ.

ಸ್ಥಳೀಯ ಸಮಸ್ಯೆಯೊಂದನ್ನು ಆಯ್ದು ಅಧ್ಯಯನ ಹಾಗು ವಿಶ್ಲೇಷಣೆಯ ನಂತರ ಸ್ವತ: ತಾವೇ ಸಿದ್ಧಪಡಿಸುವ ವೈಜ್ಞಾನಿಕ ಯೋಜನಾ ವರದಿಯನ್ನು ಮಂಡಿಸಲಿದ್ದಾರೆ. ಸಮಾವೇಶದಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳ ಅನ್ವೇಷಣೆ, ಕುತೂಹಲಪೂರಿತ ಅಧ್ಯಯನ ಸ್ವಭಾವಕ್ಕೆ ಹಾಗೂ ಭೌದ್ಧಿಕ ಅಭಿವೃದ್ಧಿಯ ಸಮಗ್ರ ಬೆಳವಣಿಗೆಗೆ ಅವಕಾಶ ದೊರೆಯುತ್ತದೆ.

ಪ್ರಸ್ತುತ 2018ನೇ ಸಾಲಿನಲ್ಲಿ ಜರುಗತ್ತಿರುವ ಈ ಸಮಾವೇಶದಲ್ಲಿ ರಾಜ್ಯದಾದ್ಯಂತ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶದ ವಿದ್ಯಾರ್ಥಿಗಳು ಭಾಗವಹಿಸಲು ವಿಜ್ಞಾನ ಪರಿಷತ್ತು ಕರೆ ನೀಡುತ್ತಿದೆ.

ಕಾರ್ಯಕ್ರಮದ ಅಂಗವಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ನವೆಂಬರ್ ಮಧ್ಯಂತರದಲ್ಲಿ ಜಿಲ್ಲಾಮಟ್ಟದ ಸಮಾವೇಶ, ಡಿಸೆಂಬರ್ ಮೊದಲ ವಾರದಲ್ಲಿ 3 ದಿನ ಅವಧಿಯ ರಾಜ್ಯಮಟ್ಟದ ಸಮಾವೇಶ, ನಂತರ ಡಿಸೆಂಬರ್ 27 ರಿಂದ 31 ರವರೆಗೆ ಒರಿಸ್ಸಾ ರಾಜ್ಯದ ಭುವನೇಶ್ವರದಲ್ಲಿ ರಾಷ್ಟ್ರಮಟ್ಟದ ಸಮಾವೇಶ ಆಯೋಜನೆಗೊಳ್ಳಲಿದೆ. ರಾಜ್ಯದ 30 ಜಿಲ್ಲೆಗಳಿಂದ ಗ್ರಾಮೀಣ ಮತ್ತು ನಗರ ವಿಭಾಗದ ಅಡಿಯಲ್ಲಿ ಅತ್ಯುತ್ತಮ ಪ್ರಬಂಧಗಳನ್ನು ಮಂಡಿಸುವ 10 ತಂಡಗಳು ರಾಜ್ಯಮಟ್ಟದ ಸಮಾವೇಶದಲ್ಲಿ ಭಾಗವಹಿಸಲು ಆಯ್ಕೆಗೊಳ್ಳಲಿವೆ. ಅದರಂತೆ, ರಾಜ್ಯಮಟ್ಟದ ಸಮಾವೇಶದಲ್ಲಿ ಅತ್ಯುತ್ತಮ ಪ್ರಬಂಧಗಳ ಮಂಡನೆ ಮಾಡುವ 30 ತಂಡಗಳು ರಾಷ್ಟ್ರಮಟ್ಟದ ಸಮಾವೇಶದಲ್ಲಿ ಭಾಗವಹಿಸಲು ಆಯ್ಕೆಗೊಳ್ಳಲಿವೆ.

ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗಾಗಿ ಭಾಗವಹಿಸಲು ಅನುಕೂಲವಾಗುವಂತೆ ಮಾರ್ಗದರ್ಶಿ ಚಟುವಟಿಕೆಗಳ ಸಂಪನ್ಮೂಲ ಕೈಪಿಡಿ ಲಭ್ಯವಿದ್ದು, ವಾಟ್ಸಾಪ್ ನಂ.9008442557 ಸಂಪರ್ಕಿಸಿ ಮಾಹಿತಿ ಮತ್ತು ಕೈಪಿಡಿ ಪಡೆಯಬಹುದಾಗಿದೆ ಅಥವಾ ವೆಬ್‌ಸೈಟ್ : www.krvp.org ಮೂಲಕ ಮಾಹಿತಿ ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.